# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 559(730) |
| ಮಾನ್ಯ ಸದಸ್ಯರ ಹೆಸರು | : | ಶ್ರೀ ಕೇಶವ ಪ್ರಸಾದ್ ಎಸ್. ( ವಿಧಾನಸಭೆಯಿಂದ ಚುನಾಯಿತರು) |
| ಉತ್ತರಿಸುವ ಸಚಿವರು | : | ಮಾನ್ಯ ಉನ್ನತ ಶಿಕ್ಷಣ ಸಚಿವರು |
| ಉತ್ತರಿಸಬೇಕಾದ ದಿನಾಂಕ | : | 11.12.2023 |

| ಕ್ರಮ. ಸಂಖ್ಯೆ. | ಪ್ರಶ್ನೆ | ಉತ್ತರ |
|---|---|---|
| (ಅ) | ರಾಣಿ ಚೆನ್ನಮ್ಮ ವಿಶ್ವವಿದ್ಯಾಲಯದಲ್ಲಿ ವಿಜ್ಞಾನ ವಿಭಾಗಗಳಲ್ಲಿ ಭೌತಶಾಸ್ತ್ರ, ರಸಾಯನಶಾಸ್ತ್ರ, ಗಣಕಶಾಸ್ತ್ರ, ಸಸ್ಯಶಾಸ್ತ್ರ ಹಾಗೂ ಪ್ರಾಣಿಶಾಸ್ತ್ರ ಪ್ರಯೋಗಾಲಯಗಳಿದ್ದು, ವಿಶ್ವವಿದ್ಯಾಲಯ ಆರಂಭವಾಗಿ 10 ವರ್ಷಗಳು ಕಳೆದರೂ ವಿಜ್ಞಾನ ವಿಭಾಗಗಳಿಗೆ ಪ್ರಯೋಗಾಲಯ ಸಹಾಯಕರ ಹಾಗೂ ಅಧೀಕ್ಷಕರ (Lab and Stores) ಹುದ್ದೆಗಳನ್ನು ಮಂಜೂರು ಮಾಡದಿರಲು ಕಾರಣಗಳೇನು; | ಬೆಳಗಾವಿಯ ರಾಣಿ ಚನ್ನಮ್ಮ ವಿಶ್ವವಿದ್ಯಾಲಯಕ್ಕೆ ಒಟ್ಟು 298 ಬೋಧಕೇತರ ಹುದ್ದೆಗಳು ಮಂಜೂರಾಗಿದ್ದು, ಅದರಲ್ಲಿ ಪ್ರಯೋಗಾಲಯ ಸಹಾಯಕ ಹಾಗೂ ಅಧೀಕ್ಷಕರ (Lab and Stores) ಹುದ್ದೆಗಳು ಮಂಜೂರಾಗಿರುವುದಿಲ್ಲ. ಅಲ್ಲದೆ ವಿಶ್ವವಿದ್ಯಾಲಯದ ಸೇವೆಯಲ್ಲಿರುವ ಪ್ರಯೋಗಾಲಯ ಸಹಾಯಕರ ಹುದ್ದೆಯು ಕರ್ನಾಟಕ ವಿಶ್ವವಿದ್ಯಾಲಯದಿಂದ ವರ್ಗಾವಣೆಗೊಂಡ ಹುದ್ದೆಯಾಗಿರುತ್ತದೆ. |
| (ಆ) | ರಸಾಯನಶಾಸ್ತ್ರ ವಿಭಾಗದಲ್ಲಿರುವ 1-Physical Chemistry, 2-Organic Chemistry, 3-Inorganic Chemistry ವಿಭಾಗಗಳಿಗೆ ಪ್ರತ್ಯೇಕವಾಗಿ ನುರಿತ ಪ್ರಯೋಗಾಲಯ ಸಹಾಯಕರ ಅವಶ್ಯಕತೆ ಇದ್ದು, ಈ ಕುರಿತು ಸರ್ಕಾರ ಕ್ರಮವಹಿಸದಿರಲು ಕಾರಣಗಳೇನು; | ರಾಣಿ ಚನ್ನಮ್ಮ ವಿಶ್ವವಿದ್ಯಾಲಯವು ಕರ್ನಾಟಕ ವಿಶ್ವವಿದ್ಯಾಲಯದಿಂದ ಬೇರ್ಪಟ್ಟು ಸ್ವತಂತ್ರ ವಿಶ್ವವಿದ್ಯಾಲಯವಾಗಿ 2010ರಲ್ಲಿ ಅಸ್ತಿತ್ವಕ್ಕೆ ಬಂದಿರುತ್ತದೆ. ರಾಣಿ ಚನ್ನಮ್ಮ ವಿಶ್ವವಿದ್ಯಾಲಯದಲ್ಲಿ ಸ್ಕೂಲ್ ಆಫ್ ಬೇಸಿಕ್ ಸೈನ್ಸ್ ಅಡಿಯಲ್ಲಿ ಬರುವ 04 ವಿಜ್ಞಾನ ವಿಭಾಗಗಳಾದ ರಸಾಯನಶಾಸ್ತ್ರ, ಸಸ್ಯಶಾಸ್ತ್ರ ಮತ್ತು ಪ್ರಾಣಿಶಾಸ್ತ್ರ ವಿಭಾಗಗಳಿದ್ದು, ಮೂಲ ಕರ್ನಾಟಕ ವಿಶ್ವವಿದ್ಯಾಲಯದಿಂದ ವರ್ಗಾಯಿಸಲ್ಪಟ್ಟ ಹಿರಿಯ ಮತ್ತು ಕಿರಿಯ ಪ್ರಯೋಗಾಲಯ ಸಹಾಯಕರ ಹುದ್ದೆಗಳನ್ನು ಹೊರತು ಪಡಿಸಿ ರಾಣಿ ಚನ್ನಮ್ಮ ವಿಶ್ವವಿದ್ಯಾಲಯದ ಪ್ರಯೋಗಾಲಯಕ್ಕೆ ಸಂಬಂಧಿಸಿದ ಯಾವುದೇ ಇತರೆ ಹುದ್ದೆಗಳು |
| (ಇ) | ಹುದ್ದೆಗಳ ಮಂಜೂರಾತಿಗೆ ವಿಶ್ವವಿದ್ಯಾಲಯದಿಂದ ಕೋರಲಾಗಿದ್ದ ವರದಿಯಲ್ಲಿ ಸ್ಪಷ್ಟ ಮಾಹಿತಿ ನೀಡದೇ | |

..2

| | | |
|---|---|---|
| | ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ, ಸದರಿ ಹುದ್ದೆಗಳನ್ನು ಆದಷ್ಟು ಶೀಘ್ರ ಮಂಜೂರು ಮಾಡಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ? | ಸೃಜನೆಯಾಗಿರುವುದಿಲ್ಲ. ಈ ಹಿನ್ನೆಲೆಯಲ್ಲಿ, ರಾಣಿ ಚನ್ನಮ್ಮ ವಿಶ್ವವಿದ್ಯಾಲಯದಿಂದ ವಿಜ್ಞಾನ ಪ್ರಯೋಗಾಲಯಕ್ಕೆ ಸಂಬಂಧಿಸಿದಂತೆ, ಒಟ್ಟು 04 ಹುದ್ದೆಗಳನ್ನು ಸೃಜಿಸುವ ಪ್ರಸ್ತಾವನೆಯು ಸ್ವೀಕೃತವಾಗಿದ್ದು, ಸರ್ಕಾರದ ಪರಿಶೀಲನೆಯಲ್ಲಿರುತ್ತದೆ. |

**ಸಂಖ್ಯೆ: ಇಡಿ/561/ಯುಆರ್ ಸಿ/2023**

**(ಡಾ|| ಎಂ.ಸಿ. ಸುಧಾಕರ್)**
ಉನ್ನತ ಶಿಕ್ಷಣ ಸಚಿವರು,
ಕರ್ನಾಟಕ ಸರ್ಕಾರ